ಕಾಲೇಜುಗಳ ಸಂಖ್ಯೆ ಎಷ್ಟು ಎಂದು ಕೇಳಿದ್ದಾರೆ. ಅದಕ್ಕೆ 11 ಕಾಲೇಜುಗಳು ಎಂದು ಹೇಳಿದ್ದೇವೆ. ಇವುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ ಎಂದು ಕೇಳಿದ್ದಾರೆ. ಅದಕ್ಕೆ 17 ಉಪನ್ಯಾಸಕರು ಹುದ್ದೆಗಳು ಖಾಲಿಯಿರುತ್ತವೆ ಎಂದು ಹೇಳಿದ್ದೇವೆ. ಈ 17 ಹುದ್ದೆಗಳನ್ನು ನಾವು ಈಗಾಗಲೇ ಲೋಕಸೇವಾ ಆಯೋಗದಲ್ಲಿ ಎಲ್ಲಾ ಪ್ರಕ್ರಿಯೆಗಳು ಮುಗಿದು ಇನ್ನು ಒಂದು ಅಥವಾ ಒಂದೂವರೆ ತಿಂಗಳ ಒಳಗೆ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡತಕ್ಕಂಥ ವ್ಯವಸ್ಥೆಯಾಗಿದೆ. ಇಷ್ಟು ದಿವಸ ಏಕೆ ತಡವಾಯಿತು ಎಂದರೆ ರಾಜ್ಯದಲ್ಲಿ ಅನೇಕ ಹುದ್ದೆಗಳು ಖಾಲಿ ಇದ್ದುದ್ದರಿಂದ ನಾವು ಅವುಗಳನ್ನು ಲೋಕಸೇವಾ ಆಯೋಗದಿಂದ ಸೆಲೆಕ್ಷನ್ ಮಾಡಿಸುವ ಪ್ರಕ್ರಿಯೆ ಸ್ವಲ್ಪ ತಡವಾಯಿತು. ಈಗ ಎಲ್ಲಾ ಮುಗಿದಿದೆ. ಇದನ್ನೆಲ್ಲಾ ಒಂದು ತಿಂಗಳ ಒಳಗೆ ಭರ್ತಿ ಮಾಡತಕ್ಕಂಥ ವ್ಯವಸ್ಥೆ ಮಾಡುತ್ತೇವೆ. ಈ 17 ಹುದ್ದೆಗಳನ್ನು ಸಾಧ್ಯವಾದಷ್ಟು ಜಾಗ್ರತೆ, ಖಂಡಿತವಾಗಿಯೂ ಸಹ ಇದನ್ನು ಭರ್ತಿ ಮಾಡತಕ್ಕಂಥ ವ್ಯವಸ್ಥೆ ಮಾಡುತ್ತೇವೆ.

ಚಿಕ್ಕೋಡಿ ಮತ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಆರೋಗ್ಯಗಳ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆ ಭರ್ತಿ.

2666 - ಶ್ರೀ ಬಾಳಾಸಾಹೇಬ ವಡ್ಡರ್ (ಚಿಕ್ಕೋಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕೋಡಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು? ಅವುಗಳಲ್ಲಿ ವೈದ್ಯರುಗಳು ನಿಗದಿತ ಪ್ರಮಾಣದಲ್ಲಿದ್ದಾರೆಯೇ ಇಲ್ಲವಾದಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು?

ಆ) ಖಾಲಿ ಇರುವ ವೈದ್ಯರುಗಳ ಹುದ್ದೆಯನ್ನು ತುಂಬಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಚಿಕ್ಕೋಡಿ ಮತಕ್ಷೇತ್ರ ವ್ಯಾಪ್ತಿಯಲ್ಲಿ 5 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. ಅವುಗಳಲ್ಲಿ ನಿಗದಿತ ಪ್ರಮಾಣದಲ್ಲಿ ವೈದ್ಯರು ಇರುವುದಿಲ್ಲ. ಒಟ್ಟು 6 ವೈದ್ಯರ ಹುದ್ದೆಗಳು ಮಂಜೂರಾಗಿದ್ದು ಅದರಲ್ಲಿ 4 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದು 2 ಹುದ್ದೆಗಳು ಖಾಲಿ ಇರುತ್ತದೆ.

ಆ) ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ವೈದ್ಯರಿಂದ, ಲೋಕಸೇವಾ ಆಯೋಗದಿಂದ ಆಯ್ಕೆಯಾದ ವೈದ್ಯರಿಂದ ಹಾಗು ಸ್ನಾತಕೋತ್ತರ ವ್ಯಾಸಂಗ ಮುಗಿಸಿಕೊಂಡು ಬಂದ ವೈದ್ಯರುಗಳಿಂದ ಖಾಲಿ ಇರುವ ವೈದ್ಯ ಹುದ್ದೆಯನ್ನು ತುಂಬಲಾಗುವುದು.

ಸಭಾಧ್ಯಕ್ಷರು : ಮಾನ್ಯ ಸದಸ್ಯರಿಗೆ ಉತ್ತರ ತೃಪ್ತಿಯಾಗಿದೆ. ಡಾ: ಹೆಚ್.ಸಿ. ಮಹದೇವಪ್ಪ : ಮಾನ್ಯ ಅಧ್ಯಕ್ಷರೆ, ಈಗ ಮಾನ್ಯ ಸದಸ್ಯರ ಕ್ಷೇತ್ರದಲ್ಲಿ 5 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. 6 ವೈದ್ಯರ ಹುದ್ದೆಗಳು ಮಂಜೂರಾಗಿವೆ. ಈಗಾಗಲೇ 4 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇಬ್ಬರು ವೈದ್ಯರ ಕೊರತೆ ಇದೆ. ಅವರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ವೈದ್ಯರಿಂದ, ಮತ್ತು ಲೋಕಸೇವಾ ಆಯೋಗದಿಂದ ಆಯ್ಕೆಯಾದ ನಂತರ ಭರ್ತಿ ಮಾಡಿಕೊಡುತ್ತೇವೆ.